ದಿಃ 22-11-2025 ರಂದು ಸಾಕ್ಷಿಯನ್ನು ಕರೆಯಿಸಲಾಯಿತು ಮತ್ತು ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಶ್ರೀ ವಾದಿ ಪರ ಶ್ರೀ. CSP ವಕೀಲರಿಂದಃ-**

ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದು, ಸದರಿ ಸಾಕ್ಷ್ಯ ಪ್ರಮಾಣ ಪತ್ರದಲ್ಲಿ ಬರೆದಿರುವ ಎಲ್ಲ ವಿಷಯಗಳು ನನ್ನ ಮಾಹಿತಿ ಪ್ರಕಾರ ಸತ್ಯ ಮತ್ತು ಸರಿಯಾಗಿರುತ್ತವೆ . ಮುಖ್ಯ ಸಾಕ್ಷ್ಯ ಪ್ರಮಾಣ ಪತ್ರಕ್ಕೆ ನಾನು ಸಹಿ ಮಾಡಿರುತ್ತೇನೆ.

**ವಾದಿಯು ಈ ಕೆಳಕಂಡಂತೆ ದಾಖಲಾತಿಗಳನ್ನು ಹಾಜರುಪಡಿಸಿದ್ದು ಇರುತ್ತದೆ.**

1. ಮದುವೆಯ ಆಮಂತ್ರಣ ಪತ್ರಿಕೆಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.1 ಎಂದು ನಿಶಾನೆಗೊಳಿಸಲಾಯಿತು.
2. ಮದುವೆ ಫೋಟೋವನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.2 ಎಂದು ನಿಶಾನೆಗೊಳಿಸಲಾಯಿತು.
3. ಅದಕ್ಕೆ ಸಂಬಂಧಿಸಿದ ಅಡಕಮುದ್ರೆಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.3 ಎಂದು ನಿಶಾನೆಗೊಳಿಸಲಾಯಿತು.

**ಮುಂದುವರೆದ ಮುಖ್ಯವಿಚಾರಣೆಗೆ ಕಾಲಾವಕಾಶ ಕೇಳಿದ್ದು, ಕಾಲಾವಕಾಶ ನೀಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು.)

ಓ.ಹೇ.ಕೇ.ಸರಿ ಇದೆ ಎಂದು ಸಾಕ್ಷಿದಾರನು ಒಪ್ಪಿಕೊಂಡಿರುತ್ತಾನೆ.

Sd/-
ದಿವಾಣಿ ನ್ಯಾಯಾಧೀಶರು ಮತ್ತು
ಪ್ರ.ದ.ದಂಡಾಧೀಕಾರಿಗಳು, ಶಹಾಬಾದ